ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ
ನಿರ್ದೇಶಕರ ಕಛೇರಿ,
ಎಚ್. ಬಿ. ಕಾಂಪ್ಲೆಕ್ಸ್, 6ನೇ ಮಹಡಿ
ಕಾವೇರಿ ಭವನ, ಕೆಂಪೇಗೌಡ ರಸ್ತೆ,
ಬೆಂಗಳೂರು – 560 009.

**ಸಹಾಯಕ ಸರ್ಕಾರಿ ಅಭಿಯೋಜಕರು–ವ–ಸಹಾಯಕ ಸರ್ಕಾರಿ ವಕೀಲರ ನೇಮಕಾತಿ ಸಮಿತಿ, ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ನಿರ್ದೇಶಕರ ಕಛೇರಿ, ಕಾವೇರಿ ಭವನ, 6ನೇ ಮಹಡಿ, ಕೆ.ಜಿ. ರಸ್ತೆ, ಬೆಂಗಳೂರು – 560 009**

**ಹೆಚ್ಚುವರಿ ಅಧಿಸೂಚನೆ ಸಂಖ್ಯೆ:ಡಿಪಿಎನ್:ನೇಸ:09:2019–20**
**ಬೆಂಗಳೂರು, ದಿನಾಂಕ: 08ನೇ ಏಪ್ರಿಲ್ 2022.**

ನೇಮಕಾತಿ ಸಮಿತಿಯ ಅಧಿಸೂಚನೆ ಸಂಖ್ಯೆ:ಡಿಪಿಎನ್:ನೇಸ:09:2019–20, ಬೆಂಗಳೂರು, ದಿನಾಂಕ: 26ನೇ ಅಕ್ಟೋಬರ್ 2021ರಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕರು–ವ–ಸಹಾಯಕ ಸರ್ಕಾರಿ ವಕೀಲರ ಹುದ್ದೆಯ ನೇಮಕಾತಿಗೆ ಸಂಬಂಧಿಸಿದಂತೆ ಮುಖ್ಯ ಪರೀಕ್ಷೆಗೆ ಅರ್ಹರಾದ ಅಭ್ಯರ್ಥಿಗಳ ಪಟ್ಟಿಯನ್ನು ಪ್ರಕಟಿಸಿದ್ದು, ಸದರಿ ಪಟ್ಟಿಯ ಅನುಸಾರ ಮುಖ್ಯ ಪರೀಕ್ಷೆಗೆ ಅರ್ಹರಾದ ಕೆಲವು ಅಭ್ಯರ್ಥಿಗಳು ಕರೋನಾ ಸಾಂಕ್ರಾಮಿಕ ರೋಗ ಹಾಗೂ ಇತರೆ ಕಾರಣಗಳಿಂದಾಗಿ ನಿಗದಿತ ಅವಧಿಯಲ್ಲಿ ಮುಖ್ಯ ಪರೀಕ್ಷೆಗೆ ನಿಗದಿತ ಶುಲ್ಕವನ್ನು ಪಾವತಿಸಲು ಸಾಧ್ಯವಾಗಿರುವುದಿಲ್ಲವೆಂದು ನಿವೇದಿಸಿ, ಮುಖ್ಯ ಪರೀಕ್ಷೆಗೆ ಫೀ ಪಾವತಿಸಿ ಪರೀಕ್ಷೆ ಬರೆಯಲು ಅವಕಾಶ ಮಾಡಿಕೊಡುವಂತೆ ಮನವಿಗಳನ್ನು ಸಲ್ಲಿಸಿರುತ್ತಾರೆ.

ದಿನಾಂಕ: 06.04.2022ರಂದು ಸಹಾಯಕ ಸರ್ಕಾರಿ ಅಭಿಯೋಜಕರು–ವ–ಸಹಾಯಕ ಸರ್ಕಾರಿ ವಕೀಲರ ನೇಮಕಾತಿಗೆ ಸಂಬಂಧಿಸಿದಂತೆ ಸಮಿತಿ ಸಭೆಯು ನಡೆದಿದ್ದು, ಸದರಿ ಸಮಿತಿ ಸಭೆಯಲ್ಲಿ ಮುಖ್ಯ ಪರೀಕ್ಷೆಗೆ ನಿಗದಿತ ಅವಧಿಯಲ್ಲಿ ಪರೀಕ್ಷಾ ಶುಲ್ಕ ಪಾವತಿಸಲು ಸಾಧ್ಯವಾಗದ ಅರ್ಹ ಅಭ್ಯರ್ಥಿಗಳು ಸಲ್ಲಿಸಿದ ಮನವಿಗಳನ್ನು ಪರಿಶೀಲಿಸಿ, ಮುಖ್ಯ ಪರೀಕ್ಷೆ ಬರೆಯಲು ಅವಕಾಶ ವಂಚಿತರಾಗಬಾರದೆಂಬ ಸದುದ್ದೇಶದಿಂದ ಶುಲ್ಕ ಪಾವತಿಸದೆ ಇರುವ ಅಭ್ಯರ್ಥಿಗಳಿಗೆ ನಿಗದಿತ ಶುಲ್ಕದ ಜೊತೆಗೆ ರೂ. 500–00 ದಂಡವನ್ನು ನಿಗದಿಪಡಿಸಿ, ಪರೀಕ್ಷೆ ಬರೆಯಲು ಅವಕಾಶ ಮಾಡಿಕೊಡುವ ಬಗ್ಗೆ ನಿರ್ಣಯಿಸಿ, ಈ ಬಗ್ಗೆ ಪ್ರತ್ಯೇಕ ಅಧಿಸೂಚನೆ ಹೊರಡಿಸಲು ಸಮಿತಿಯ ಸದಸ್ಯ ಕಾರ್ಯದರ್ಶಿಯವರಿಗೆ ಸೂಚಿಸಿರುತ್ತದೆ.

ದಿನಾಂಕ: 26ನೇ ಅಕ್ಟೋಬರ್ 2021ರಂದು ಹೊರಡಿಸಿದ ಅಧಿಸೂಚನೆಯ ಅನುಸಾರ ಅರ್ಹರಿರುವ ಅಭ್ಯರ್ಥಿಗಳಲ್ಲಿ ನಿಗದಿತ ಅವಧಿಯೊಳಗೆ ಪರೀಕ್ಷಾ ಶುಲ್ಕ ಪಾವತಿಸಲು ಸಾಧ್ಯವಾಗದ ಅಭ್ಯರ್ಥಿಗಳಿಗೆ ರೂ. 500–00ರ ದಂಡ ಶುಲ್ಕದೊಂದಿಗೆ ಪರೀಕ್ಷಾ ಶುಲ್ಕ ಪಾವತಿಸಲು ದಿನಾಂಕ: 10.04.2022 ರಿಂದ 17.04.2022ರವರೆಗೆ ಆಯ್ಕೆ ಸಮಿತಿಯ ತೀರ್ಮಾನದಂತೆ ಮತ್ತೊಂದು ಅವಕಾಶವನ್ನು ನೀಡಲಾಗಿರುತ್ತದೆ. ಅಂತಹ ಅಭ್ಯರ್ಥಿಗಳು ಈ ಕೆಳಗೆ ನಮೂದಿಸಿದಂತೆ ಮುಖ್ಯ ಪರೀಕ್ಷೆಗೆ ಶುಲ್ಕವನ್ನು ನಿಗದಿಪಡಿಸಿದ ಅವಧಿಯೊಳಗೆ ಪಾವತಿಸುವುದು.

| ಕ್ರ. ಸಂ. | ವರ್ಗ | ಪಾವತಿಸಬೇಕಾದ ಪರೀಕ್ಷಾ ಶುಲ್ಕ | ದಂಡ ಶುಲ್ಕ | ಒಟ್ಟು ಶುಲ್ಕ |
|---|---|---|---|---|
| 01. | ಸಾಮಾನ್ಯ ವರ್ಗ ಹಾಗೂ ಇತರ ಎಲ್ಲ ಪ್ರವರ್ಗಗಳ ಅಭ್ಯರ್ಥಿಗಳಿಗೆ | ರೂ. 2,000–00 | 500–00 | 2,500–00 |
| 02. | ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ | ರೂ. 1,000–00 | 500–00 | 1,500–00 |

ಮುಖ್ಯ ಪರೀಕ್ಷಾ ಶುಲ್ಕವನ್ನು ದಿನಾಂಕ: 10.04.2022 ರಿಂದ ಪ್ರಾರಂಭಗೊಂಡು, ದಿನಾಂಕ: 17.04.2022ರ ಒಳಗಾಗಿ **SB Collect Platform** ನಲ್ಲಿ **Online (UPI/NEFT Etc)** ಮುಖಾಂತರ ಪಾವತಿಸತಕ್ಕದ್ದು. **SB Collect Platform** ಗೆ ಸಂಬಂಧಿಸಿದ https://www.onlinesbi.sbi/sbicollect/icollecthome.htm?corpid4464761 ಲಿಂಕನ್ನು ಉಪಯೋಗಿಸಬಹುದಾಗಿದೆ.

ಮೇಲ್ಕಂಡ ಲಿಂಕ್‌ನ್ನು ಅಭ್ಯರ್ಥಿಗಳು ಶುಲ್ಕ ಪಾವತಿ ಮತ್ತು ವಿವರ ಸಲ್ಲಿಕೆಗಾಗಿ ಉಪಯೋಗಿಸುವ ಸಂದರ್ಭಲ್ಲಿ ಪರೀಕ್ಷಾ ಶುಲ್ಕವನ್ನು ಪಾವತಿಸುವ ಉದ್ದೇಶಗಳಿಗಾಗಿ ಮಾತ್ರ "Category" ಎಂಬುದಾಗಿ ಕಾಣಿಸಿಕೊಳ್ಳುವ ಅಂಕಣದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳನ್ನು ಹೊರತುಪಡಿಸಿ, ಉಳಿದ ಎಲ್ಲ ವರ್ಗದ ಅಭ್ಯರ್ಥಿಗಳೂ ಈ ಅಂಕಣವನ್ನು "ಸಾಮಾನ್ಯ (General)" ಎಂಬುದಾಗಿ ಭರ್ತಿಮಾಡತಕ್ಕದ್ದು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಈ ಅಂಕಣದಲ್ಲಿ ತಮಗೆ ಸಂಬಂಧಿಸಿದ ವರ್ಗವನ್ನು ನಮೂಸಿ ಅಂಕಣವನ್ನು ಭರ್ತಿ ಮಾಡತಕ್ಕದ್ದು.

"Selected Category" ಎಂಬುದಾಗಿ ಕಾಣಿಸಿಕೊಳ್ಳುವ ಅಂಕಣದಲ್ಲಿ ಈ ಕಛೇರಿಯ ಅಧಿಸೂಚನೆ ಸಂಖ್ಯೆ:ಡಿಪಿಎನ್:ನೇಸ:09:2019-20, ದಿನಾಂಕ: 26.10.2021ರ ಅನ್ವಯ ಯಾವ ವರ್ಗದಡಿಯಲ್ಲಿ ಅಭ್ಯರ್ಥಿಗಳು ಮುಖ್ಯ ಪರೀಕ್ಷೆಗೆ ಅರ್ಹತೆಯನ್ನು ಪಡೆದುಕೊಂಡಿರುತ್ತಾರೆಯೋ ಆ ವರ್ಗವನ್ನು ನಮೂದಿಸಿ, ಆ ಅಂಕಣವನ್ನು ಭರ್ತಿ ಮಾಡತಕ್ಕದ್ದು.

ಹೆಚ್ಚಿನ ಮಾಹಿತಿಗಾಗಿ ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆಯ ವೆಬ್‌ಸೈಟ್: https://dop.karnataka.gov.in/ನ್ನು ಅವಲೋಕಿಸಬಹುದಾಗಿದೆ. ಮುಖ್ಯ ಪರೀಕ್ಷೆಯ ದಿನಾಂಕ, ಪರೀಕ್ಷೆಯನ್ನು ನಡೆಸಲಾಗುವ ಸಮಯ, ಪರೀಕ್ಷಾ ಕೇಂದ್ರಗಳ ವಿವರ, ಪ್ರವೇಶ ಪತ್ರ ಪಡೆಯುವ ವಿಧಾನ ಇತ್ಯಾದಿ ಮಾಹಿತಿಗಳನ್ನು ಶೀಘ್ರದಲ್ಲಿಯೇ ಪ್ರಕಟಿಸಲಾಗುವುದು.

8/4/2022

( ಹೆಚ್.ಕೆ. ಜಗದೀಶ್ )
ನಿರ್ದೇಶಕರು(ಪ್ರ)
ಹಾಗೂ ನೇಮಕಾತಿ ಸಮಿತಿ ಸದಸ್ಯ ಕಾರ್ಯದರ್ಶಿಗಳು,
ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ
ಇಲಾಖೆ, ಬೆಂಗಳೂರು

ಪ್ರತಿಯನ್ನು: ಇ-ಮೇಲ್ ಮುಖಾಂತರ ಸಲ್ಲಿಸಲಾಗಿದೆ/ಕಳುಹಿಸಲಾಗಿದೆ.

1. ರಾಜ್ಯದ ಎಲ್ಲಾ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಮಾಹಿತಿಗಾಗಿ ಹಾಗೂ ತಮ್ಮ ವ್ಯಾಪ್ತಿಯಲ್ಲಿ ಬರುವ ಎಲ್ಲ ಕಛೇರಿಗಳಲ್ಲಿ ಪ್ರಕಟಿಸುವ ಬಗ್ಗೆ ಕ್ರಮ ಕೈಗೊಳ್ಳುವಂತೆ ಗೌರವಪೂರ್ವಕವಾಗಿ ಕೋರಲಾಗಿದೆ.
2. ಕರ್ನಾಟಕ ರಾಜ್ಯ ವಕೀಲರ ಪರಿಷತ್ತು, ಬೆಂಗಳೂರು, ಅವರ ಮಾಹಿತಿಗಾಗಿ ಹಾಗೂ ರಾಜ್ಯದ ಎಲ್ಲ ವಕೀಲರ ಸಂಘಗಳಲ್ಲಿ ಪ್ರಕಟಿಸುವ ಬಗ್ಗೆ ಕ್ರಮ ಕೈಗೊಳ್ಳುವಂತೆ ವಿನಂತಿಸಲಾಗಿದೆ.
3. ರಾಜ್ಯದ ಎಲ್ಲಾ ಕಾನೂನು ಅಧಿಕಾರಿಗಳು(ಹಿರಿಯ), ಅವರ ಮಾಹಿತಿಗಾಗಿ ಹಾಗೂ ತಮ್ಮ ಕಛೇರಿಯನ್ನು ಒಳಗೊಂಡಂತೆ ತಮ್ಮ ವ್ಯಾಪ್ತಿಯಲ್ಲಿ ಬರುವ ಎಲ್ಲ ಅಭಿಯೋಜಕರ ಕಛೇರಿಯ ಸೂಚನಾ ಫಲಕಗಳಲ್ಲಿ ತಕ್ಷಣ ಪ್ರಕಟಿಸುವ ಬಗ್ಗೆ ಕ್ರಮ ವಹಿಸಲು ತಿಳಿಸಲಾಗಿದೆ.
4. ಕಛೇರಿ ಸೂಚನಾ ಫಲಕಕ್ಕೆ